## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ: ಬಿ. ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಶ್ರೀನಿವಾಸಪುರ, ಇವರ ವಿರುದ್ಧದ ಇಲಾಖಾ ವಿಚಾರಣೆ ಜರುಗಿಸಲು ಬದಲಿ ವಿಚಾರಣಾಧಿಕಾರಿಗಳ ನೇಮಕ ಮಾಡುವ ಬಗ್ಗೆ.

ಓದಲಾಗಿದೆ:1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 103 ವಿಸೇಬಿ 2011 ದಿ:15-7-2013
2. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರ ಪತ್ರ ದಿನಾಂಕ 12.08.2013.

-------

ಪ್ರಸ್ತಾವನೆ:

ಡಾ: ಬಿ. ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಶ್ರೀನಿವಾಸಪುರ, ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕಛೇರಿಗೆ ಸರಿಯಾಗಿ ಹಾಜರಾಗದೇ ಸರ್ಕಾರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸದ ಮತ್ತು 2010-11 ನೇ ಸಾಲಿನ ಎಂಜಿ ಎನ್ ಆರ್ ಇಜಿಎಸ್ ಯೋಜನೆಯ ಅನುಷ್ಠಾನದಲ್ಲಿ ಕರ್ತವ್ಯಲೋಪವೆಸಗಿರುವ ವಿವಿಧ 13 ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು, ಇವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದಲ್ಲಿ ವಿಚಾರಣಾಧಿಕಾರಿಯಾಗಿ ನೇಮಿಸಲಾಗಿತ್ತು.

ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಅನಾರೋಗ್ಯದ ಕಾರಣದಿಂದ ಪ್ರಕರಣದ ವಿಚಾರಣೆ ನಡೆಸಲು ಆಗುವುದಿಲ್ಲ. ಆದುದರಿಂದ ಪ್ರಕರಣದ ವಿಚಾರಣೆ ನಡೆಸಲು ಬೇರೊಬ್ಬರು ವಿಚಾರಣಾದಿ ಕಾರಿಯವರನ್ನು ನೇಮಿಸುವಂತೆ ಕೋರಿರುತ್ತಾರೆ. ಆದುದರಿಂದ ಈ ಪ್ರಕರಣದ ಇಲಾಖಾ ವಿಚಾರಣೆಯನ್ನು ನಡೆಸಲು ಬೇರೊಬ್ಬರು ವಿಚಾರಣಾಧಿಕಾರಿಯನ್ನಾಗಿ ಶ್ರೀ ಎನ್.ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು ಬೆಂಗಳೂರು ಇವರನ್ನು ನೇಮಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 103 ವಿಸೇಬಿ 2011 ಬೆಂಗಳೂರು ದಿನಾಂಕ:20-09-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಡಾ: ಬಿ. ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಶ್ರೀನಿವಾಸಪುರ, ಇವರ ವಿರುದ್ಧ ಮಾಡಿರುವ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಶ್ರೀ ಎನ್.ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲಾಗಿದೆ.

ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಕೋಲಾರ ಇವರು ಮಂಡನಾಧಿಕಾರಿಯಾಗಿ ಮುಂದುವರೆದಿರುತ್ತಾರೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕನಾಸೇ (ವನಿಮೇ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು (ಗ್ರಾ) ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು (ಗ್ರಾ)/ ಕೋಲಾರ.
3. ಶ್ರೀ ಎನ್. ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮ.ನಂ. 1033, 9ನೇ ಬಿ ಮೈನ್, 8ನೇ ಕ್ರಾಸ್, ನ್ಯಾಯಾಂಗ ಬಡಾವಣೆ, ಜಿಕೆವಿಕೆ ಅಂಚೆ, ಬೆಂಗಳೂರು. (9845433376)
4. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮನೆ ನಂ.1242, 8ನೇ ಅಡ್ಡ ರಸ್ತೆ, ಚಂದ್ರಾಲೇಔಟ್, ಬೆಂಗಳೂರು-40.
5. ಉಪ ಕಾರ್ಯದರ್ಶಿ ,ಜಿಲ್ಲಾ ಪಂಚಾಯತಿ, ಕೋಲಾರ ( ಮಂಡನಾಧಿಕಾರಿ). (ಮೊಬೈಲ್ 9480870001)
6. ಡಾ: ಬಿ. ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಶ್ರೀನಿವಾಸಪುರ,, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಇವರ ಮುಖಾಂತರ)
7. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
8. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.